**Akashvani : Bangalore**

**06.08.2024** **19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

**<><*<><>*><>**

**೧. ಬಾಂಗ್ಲಾದೇಶದಲ್ಲಿರುವ ಭಾರತೀಯರ ರಕ್ಷಣೆಗೆ ಕೇಂದ್ರ ಸರ್ಕಾರ ಬದ್ಧ- ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್**

**೨. ಬಾಂಗ್ಲಾದೇಶದಲ್ಲಿ ಸಂಸತ್ ವಿಸರ್ಜಿಸಿ, ಮಧ್ಯಂತರ ಸರ್ಕಾರ ರಚಿಸಿದ ಬಾಂಗ್ಲಾ ರಾಷ್ಟ್ರಪತಿ ಮೊಹಮ್ಮದ್ ಶಹಾಬುದ್ದೀನ್**

**೩. ದೇಶದ ಯಾವುದೇ ಪ್ರಮುಖ ಬಂದರನ್ನು ಖಾಸಗೀಕರಣಗೊಳಿಸಿಲ್ಲ - ಕೇಂದ್ರ ಸರ್ಕಾರ ಸ್ಪಷ್ಟನೆ**

**೪. ಕಳೆದ ಹತ್ತು ವರ್ಷಗಳಲ್ಲಿ ಭಾರತದ ನವೀಕರಿಸಬಹುದಾದ ಇಂಧನ ಸಾಮರ್ಥ್ಯ ಶೇಕಡ ೧೬೫ ರಷ್ಟು ಬೆಳವಣಿಗೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ**

**೫. ಪ್ಯಾರಿಸ್ ಒಲಿಂಪಿಕ್: ಜಾವಲಿನ್ ಥ್ರೊ ವಿಭಾಗದಲ್ಲಿ ಫೈನಲ್ ಪ್ರವೇಶಿಸಿದ ಭಾರತದ ನೀರಜ್ ಚೋಪ್ರಾ ; ಹಾಕಿ ಸೆಮಿಫೈನಲ್ ಪಂದ್ಯದಲ್ಲಿಂದು ಜರ್ಮನಿ ವಿರುದ್ಧ ಭಾರತ ಸೆಣಸಾಟ**

**<><*<><>*><>**

ಭಾರತವು ತನ್ನ ರಾಜತಾಂತ್ರಿಕ ಕಾರ್ಯಾಚರಣೆಗಳ ಮೂಲಕ ಬಾಂಗ್ಲಾದೇಶದಲ್ಲಿರುವ ಭಾರತಿಯರೊಂದಿಗೆ ನಿಕಟ ಮತ್ತು ನಿರಂತರ ಸಂಪರ್ಕದಲ್ಲಿದೆ. ೯ ಸಾವಿರ ವಿದ್ಯಾರ್ಥಿಗಳು ಸೇರಿದಂತೆ ಸುಮಾರು ೧೯

ಸಾವಿರ ಭಾರತೀಯರು ಪ್ರಸ್ತುತ ಬಾಂಗ್ಲಾದೇಶದಲ್ಲಿದ್ದಾರೆ. ಬಾಂಗ್ಲಾದೇಶದಲ್ಲಿರುವ ಭಾರತೀಯರ ರಕ್ಷಣೆಗೆ ಕೇಂದ್ರ ಸರ್ಕಾರ ಬದ್ಧ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ರಾಜ್ಯಸಭೆಯಲ್ಲಿಂದು ತಿಳಿಸಿದ್ದಾರೆ. ಬಾಂಗ್ಲಾದೇಶದ ಪರಿಸ್ಥಿತಿ ಕುರಿತು ರಾಜ್ಯಸಭೆಗೆ ಮಾಹಿತಿ ನೀಡಿರುವ ಅವರು, ಢಾಕಾದಲ್ಲಿರುವ ಭಾರತೀಯ ಹೈಕಮಿಷನ್ ಸಲಹೆ ಮೇರೆಗೆ ಕಳೆದ ತಿಂಗಳೇ ಹೆಚ್ಚಿನ ವಿದ್ಯಾರ್ಥಿಗಳು ಭಾರತಕ್ಕೆ ಮರಳಿದ್ದಾರೆ. ಬಾಂಗ್ಲಾದೇಶದ ಪರಿಸ್ಥಿತಿಯನ್ನು ಭಾರತ ಸೂಕ್ಷ್ಮವಾಗಿ ಗಮನಿಸುತ್ತಿದೆ. ಅಲ್ಲದೆ, ಈ ಸಂಕೀರ್ಣ ಸ್ಥತಿಯನ್ನು ಸೂಕ್ಷ್ಮವಾಗಿ ಗಮನಿಸುವಂತೆ ಭಾರತೀಯ ಗಡಿಕಾವಲು ಪಡೆಗಳಿಗೆ ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದರು.  ಭದ್ರತಾ ಸಂಸ್ಥೆಗಳ ಪ್ರಮುಖರನ್ನು ಭೇಟಿಯಾದ ನಂತರ ಬಾಂಗ್ಲಾದೇಶದ ಪ್ರಧಾನಿ ಶೇಕ್ ಹಸೀನಾ ಅವರು, ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಭಾರತಕ್ಕೆ ಬರಲು ಅವರು ಅನುಮತಿ ಕೋರಿ ನಿನ್ನೆ ಸಂಜೆ ದೆಹಲಿಗೆ ಆಗಮಿಸಿದ್ದಾರೆ ಎಂದು ಡಾ.ಎಸ್.ಜೈಶಂಕರ್ ತಿಳಿಸಿದರು. ಢಾಕಾದಲ್ಲಿನ ಅಧಿಕಾರಿಗಳೊಂದಿಗೆ ಭಾರತ ನಿರಂತರ ಸಂಪರ್ಕದಲ್ಲಿದೆ. ಬಾಂಗ್ಲಾದೇಶದಲ್ಲಿನ ಪರಿಸ್ಥಿತಿ ಇನ್ನೂ ಸೂಕ್ಷ್ಮವಾಗಿದೆ. ಢಾಕಾದಲ್ಲಿನ ಭಾರತೀಯ ಹೈಕಮಿಷನ್ ಜೊತೆಗೆ ಚಿತ್ತಗಾಂಗ್, ರಾಜ್‌ಶಾಹಿ, ಖುಲ್ನಾ ಮತ್ತು ಸಿಲೆಟ್‌ನಲ್ಲಿ ಸಹಾಯಕ ಹೈಕಮಿಷನ್ ಕಚೇರಿಗಳಿವೆ. ಈ ಕಚೇರಿಗಳಿಗೆ ಅಲ್ಲಿನ ಮಧ್ಯಂತರ ಸರ್ಕಾರ ಅಗತ್ಯ ರಕ್ಷಣೆ ಒದಗಿಸಲಿದೆ ಎಂಬ ನಿರೀಕ್ಷೆ ಭಾರತಕ್ಕಿದೆ ಎಂದು ಹೇಳಿದರು.

**<><*<><>*><>**

ಗಡಿ ಭದ್ರತಾ ಪಡೆ-ಬಿಎಸ್‌ಎಫ್ ಮಹಾನಿರ್ದೇಶಕ ದಲ್ಜಿತ್ ಸಿಂಗ್ ಚೌಧರಿ ಅವರು ಇಂದು ಪಶ್ಚಿಮ ಬಂಗಾಳದ ಉತ್ತರ ೨೪ ಪರಗಣ ಜಿಲ್ಲೆಯ ಭಾರತ-ಬಾಂಗ್ಲಾದೇಶ ಗಡಿಗೆ ಭೇಟಿ ನೀಡಿದರು.  ಬಿಎಸ್‌ಎಫ್‌ನ ಕಾರ್ಯಾಚರಣೆಯ

ಸಿದ್ಧತೆ ಮತ್ತು ಕಾರ್ಯತಂತ್ರದ ನಿಯೋಜನೆಯನ್ನು ಅವರು ಪರಿಶೀಲಿಸಿದರು. ಬಾಂಗ್ಲಾದೇಶದ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಬಿಎಸ್‌ಎಫ್, ಭಾರತ-ಬಾಂಗ್ಲಾದೇಶ ಗಡಿಯಲ್ಲಿ ಅಲರ್ಟ್ ಘೋಷಿಸಿದೆ.

**<><*<><>*><>**

ಬಾಂಗ್ಲಾದೇಶದಲ್ಲಿ ವ್ಯಾಪಕ ಪ್ರತಿಭಟನೆ ಹಿನ್ನೆಲೆಯಲ್ಲಿ ಪ್ರಧಾನಿ ಸ್ಥಾನಕ್ಕೆ ಶೇಖ್ ಹಸೀನಾ, ರಾಜೀನಾಮೆ ನೀಡಿದ ಬೆನ್ನಲ್ಲೇ ಬಾಂಗ್ಲಾ ರಾಷ್ಟ್ರಪತಿ ಮೊಹಮ್ಮದ್ ಶಹಬುದ್ದೀನ್ ಸಂಸತ್ ವಿಸರ್ಜಿಸಿದ್ದು, ಮಧ್ಯಂತರ ಸರ್ಕಾರವನ್ನು ರಚಿಸಿದ್ದಾರೆ. ಬಾಂಗ್ಲಾದೇಶದ ಸಶಸ್ತ್ರ ಪಡೆಗಳ ಮುಖ್ಯಸ್ಥರು, ವಿವಿಧ ರಾಜಕೀಯ ಪಕ್ಷಗಳ ನಾಯಕರು, ತಾರತಮ್ಯ ವಿರೋಧಿ ವಿದ್ಯಾರ್ಥಿ ಚಳವಳಿಯ ಮುಖಂಡರೊಂದಿಗೆ ಚರ್ಚಿಸಿದ ಬಳಿಕ ಸಂಸತ್ ವಿಸರ್ಜಿಸುವ ನಿರ್ಧಾರವನ್ನು ರಾಷ್ಟ್ರಪತಿ ಮೊಹಮ್ಮದ್ ಶಹಬುದ್ದೀನ್ ತೆಗೆದುಕೊಂಡಿದ್ದಾರೆ ಎಂದು ವರದಿಗಳು ತಿಳಿಸಿವೆ. ನೊಬೆಲ್ ಪುರಸ್ಕೃತ ಡಾ.ಮೊಹಮ್ಮದ್ ಯೂನಸ್ ಅವರನ್ನು ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರರನ್ನಾಗಿ ನೇಮಿಸುವಂತೆ ವಿದ್ಯಾರ್ಥಿ ಸಂಘಟನೆಗಳ ಮುಖ್ಯಸ್ಥರು ಪ್ರಸ್ತಾಪ ಸಲ್ಲಿಸಿದ್ದಾರೆ.

**<><*<><>*><>**

ದೇಶದ ಯಾವುದೇ ಪ್ರಮುಖ ಬಂದರನ್ನು ಖಾಸಗೀಕರಣಗೊಳಿಸಿಲ್ಲ. ಭೂಮಿ ಮತ್ತು ಜಲಪ್ರದೇಶಗಳ ಮಾಲಿಕತ್ವವು ಸರ್ಕಾರದ ಬಳಿಯೇ ಉಳಿದಿದೆ ಎಂದು ಸರ್ಕಾರ ಹೇಳಿದೆ. ರಾಜ್ಯಸಭೆಯಲ್ಲಿಂದು ಲಿಖಿತ ಉತ್ತರ ನೀಡಿದ ಹಡಗು ಮತ್ತು ಬಂದರು ಸಚಿವ ಸರ್ಬಾನಂದ ಸೋನಾವಾಲ್, ಪ್ರಮುಖ ಬಂದರುಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಯೋಜನೆಗಳು, ಟರ್ಮಿನಲ್‌ಗಳಿಗೆ ಆದಾಯದ ಪಾಲು ಅಥವಾ ರಾಯಧನ ಪಾವತಿಯ

ಆಧಾರದ ಮೇಲೆ ನಿಗದಿತ ಅವಧಿಗಾಗಿ ಖಾಸಗಿವಲಯದ ಭಾಗವಹಿಸುವಿಕೆಯನ್ನು ಅನುಮತಿಸಲಾಗಿದೆ ಎಂದು ತಿಳಿಸಿದ್ದಾರೆ. ಈ ಒಪ್ಪಂದದ ಅವಧಿ ಪೂರ್ಣಗೊಂಡ ನಂತರ ಬಂದರು ಆಸ್ತಿಯನ್ನು ಬಂದರು ಪಾಧಿಕಾರಕ್ಕೆ ಹಸ್ತಾಂತರಿಸಲಾಗುತ್ತಿದೆ. ಕೇರಳ ಸರ್ಕಾರದ ಅಡಿಯಲ್ಲಿ ೧೨ ಪ್ರಮುಖ ಬಂದರುಗಳು ಮತ್ತು ರಾಜ್ಯ ಕಡಲ ಮಂಡಳಿಗಳಿಂದ ೨೧೭ ಪ್ರಮುಖವಲ್ಲದ ಬಂದರುಗಳನ್ನು ನಿರ್ವಹಿಸಲಾಗುತ್ತಿದೆ ಎಂದು ಸರ್ಬಾನಂದ ಸೋನಾವಾಲ್ ಮಾಹಿತಿ ನೀಡಿದ್ದಾರೆ.

<><*<><>*><>

ಕಳೆದ ಹತ್ತು ವರ್ಷಗಳಲ್ಲಿ ಭಾರತದ ನವೀಕರಿಸಬಹುದಾದ ಇಂಧನ ಸಾಮರ್ಥ್ಯವು ಶೇಕಡ ೧೬೫ ರಷ್ಟು ಬೆಳವಣಿಗೆ ದಾಖಲಿಸಿದೆ ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಈ ಕುರಿತು ರಾಜ್ಯಸಭೆಯಲ್ಲಿಂದು ಮಾಹಿತಿ ನೀಡಿದ ಅವರು, ನವೀಕರಿಸಬಹುದಾದ ಇಂಧನ ಸಾಮರ್ಥ್ಯವು ೨೦೧೪ ರಲ್ಲಿ ೭೬ ಗಿಗಾ ವ್ಯಾಟ್ ಇದದ್ದು, ೨೦೨೪ ರಲ್ಲಿ ೨೦೩ ಗಿಗಾ ವ್ಯಾಟ್‌ಗೆ ಏರಿಕೆಯಾಗಿದೆ. ನವೀಕರಿಸಬಹುದಾದ ಇಂಧನ ಸಾಮರ್ಥ್ಯದಲ್ಲಿ ಭಾರತವು ಜಾಗತಿಕವಾಗಿ ನಾಲ್ಕನೇ ಸ್ಥಾನದಲ್ಲಿದೆ ಎಂದು ಮಾಹಿತಿ ನೀಡಿದರು. ಕಳೆದ ಹತ್ತು ವರ್ಷಗಳಲ್ಲಿ ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಸುಮಾರು ೭ ಲಕ್ಷ ಕೋಟಿ ರೂಪಾಯಿಗಳನ್ನು ಹೂಡಿಕೆ ಮಾಡಲಾಗಿದೆ. ೨೦೨೪-೨೫ರ ಕೇಂದ್ರ ಬಜೆಟ್‌ನಲ್ಲಿ ಹೊಸ ಮತ್ತು ನವೀಕರಿಸಬಹುದಾದ ಇಂಧನ ಕ್ಷೇತ್ರಕ್ಕೆ ೨೧ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಅನುದಾನವನ್ನು ಮೀಸಲಿರಿಸಲಾಗಿದೆ. ಇದರಿಂದಾಗಿ ಈ ಕ್ಷೇತ್ರದಲ್ಲಿ ಹೊಸ ಉದ್ಯೋಗಗಳ ಸೃಷ್ಟಿಗೆ ಕಾರಣವಾಗಲಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದರು. ನವೀಕರಿಸಬಹುದಾದ ಇಂಧನ ಸಂಬಂಧಿಸಿದ ಯೋಜನೆಗಳಾದ ಪಿಎಂ

ಸೂರ್ಯಘರ್, ಪಿಎಂ ಕುಸುಮ್ ಮತ್ತು ರಾಷ್ಟ್ರೀಯ ಹಸಿರು ಹೈಡ್ರೋಜನ್ ಯೋಜನೆಗಾಗಿ ೧ ಲಕ್ಷ ೬೦ ಸಾವಿರ ಕೋಟಿ ರೂಪಾಯಿಗಳನ್ನು ಮೀಸಲಿರಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

’ಮೇಕ್ ಇನ್ ಇಂಡಿಯಾ’ ಉಪಕ್ರಮದ ಅಡಿಯಲ್ಲಿ ಏರೋಸ್ಪೇಸ್ ಮತ್ತು ಡಿಫೆನ್ಸ್, ಆಟೋಮೋಟಿವ್ ಮತ್ತು ಆಟೋ ಕಾಂಪೊನೆಂಟ್, ಜೈವಿಕ ತಂತ್ರಜ್ಞಾನ, ಜವಳಿ ಮತ್ತು ಉಡುಪುಗಳು, ಪ್ರವಾಸೋದ್ಯಮ ಮತ್ತು ಹಾಸ್ಪಿಟಾಲಿಟಿ, ಶಿಕ್ಷಣ ಸೇವೆಗಳು ಸೇರಿದಂತೆ ೨೭ ಉತ್ಪಾದನೆ ಮತ್ತು ಸೇವಾ ಕ್ಷೇತ್ರಗಳು ಬೆಳವಣಿಗೆ ಹೊಂದಿವೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಕುರಿತು ಲೋಕಸಭೆಯಲ್ಲಿ ಲಿಖಿತ ಉತ್ತರ ನೀಡಿದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ರಾಜ್ಯ ಸಚಿವ ಜಿತಿನ್ ಪ್ರಸಾದ್, ಹೂಡಿಕೆಗೆ ಅನುಕೂಲವಾಗುವಂತೆ, ನಾವೀನ್ಯತೆಗಳನ್ನು ಉತ್ತೇಜಿಸಲು, ಉತ್ತಮ ದರ್ಜೆಯ ಮೂಲಸೌಕರ್ಯಗಳನ್ನು ಒದಗಿಸಲು ಹಾಗೂ ಉತ್ಪಾದನೆ, ವಿನ್ಯಾಸ ಮತ್ತು ಆವಿಷ್ಕಾರದಲ್ಲಿ ಭಾರತವನ್ನು ಕೇಂದ್ರವನ್ನಾಗಿಸಲು ಮೇಕ್ ಇನ್ ಇಂಡಿಯಾ ಉಪಕ್ರಮವನ್ನು ೨೦೨೪ರ ಸೆಪ್ಟೆಂಬರ್ ೨೫ ರಂದು ಪ್ರಾರಂಭಿಸಲಾಯಿತು ಎಂದು ಹೇಳಿದರು. ’ಮೇಕ್ ಇನ್ ಇಂಡಿಯಾ’ ಉಪಕ್ರಮದ ಅಡಿಯಲ್ಲಿ ವಿವಿಧ ಸಚಿವಾಲಯಗಳು, ರಾಜ್ಯ ಸರ್ಕಾರಗಳು ಮತ್ತು ವಿದೇಶದಲ್ಲಿರುವ ಭಾರತೀಯ ಸಂಸ್ಥೆಗಳಿಂದ ಹೂಡಿಕೆ ಮಾಡಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು.

<><*<><>*><>

ಪಿಎಂ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೧೧ ಕೋಟಿಗೂ ಹೆಚ್ಚು ಫಲಾನುಭವಿ ರೈತರಿಗೆ ಇದುವರೆಗೆ ೩.೨೪ ಲಕ್ಷ ಕೋಟಿ ರೂಪಾಯಿಗಳನ್ನು ವಿತರಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು

ಈ ಕುರಿತು ಲಿಖಿತ ಉತ್ತರ ನೀಡಿದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಖಾತೆ ರಾಜ್ಯ ಸಚಿವ ರಾಮನಾಥ್ ಠಾಕೂರ್, ಇದುವರೆಗೆ ಅನುದಾನವನ್ನು ೧೭ ಕಂತುಗಳಲ್ಲಿ ಫಲಾನುಭವಿಗಳ ಖಾತೆಗಳಿಗೆ ನೇರ ವರ್ಗಾವಣೆ ಮಾಡಲಾಗಿದೆ. ಪಿಎಂ-ಕಿಸಾನ್ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ವರ್ಷಕ್ಕೆ ೬ ಸಾವಿರ ರೂಪಾಯಿಗಳನ್ನು ಮೂರು ಸಮಾನ ಕಂತುಗಳಲ್ಲಿ ವಿತರಿಸಲಾಗುತ್ತಿದೆ ಎಂದು ಹೇಳಿದರು.

<><*<><>*><>

ಫಿಜಿಗೆ ಎರಡು ದಿನಗಳ ಭೇಟಿಯಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಫಿಜಿ ಅಧ್ಯಕ್ಷ ಸಿತಿವೆನಿ ರಬುಕಾ ದೇಶದ ಅತ್ಯುನ್ನತ ಗೌರವವಾದ 'ಕಂಪ್ಯಾನಿಯನ್ ಆಫ್ ದಿ ಆರ್ಡರ್ ಆಫ್ ಫಿಜಿ' ನೀಡಿ ಗೌರವಿಸಿದರು. ಬಳಿಕ ದ್ರೌಪದಿ ಮುರ್ಮು ಅವರು ಫಿಜಿಯ ಸಂಸತ್ತನ್ನು ಉದ್ದೇಶಿಸಿ ಮಾತನಾಡಿ, ಉಭಯ ದೇಶಗಳ ನಡುವಿನ ೭೫ ವರ್ಷಗಳ ರಾಜತಾಂತ್ರಿಕ ಸಂಬಂಧವನ್ನು ಮೆಲುಕುಹಾಕಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಫಿಜಿಗೆ ಭೇಟಿ ನೀಡಿದ ನಂತರ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಗವರ್ನರ್ ಜನರಲ್ ಸಿಂಡಿ ಕಿರೊ ಅವರ ಆಹ್ವಾನದ ಮೇರೆಗೆ ನಾಳೆಯಿಂದ ೯ ರವರೆಗೆ ನ್ಯೂಜಿಲೆಂಡ್‌ಗೆ ಭೇಟಿ ನೀಡಲಿದ್ದಾರೆ. ಅಲ್ಲಿ ಅವರು ಕಿರೊ ಮತ್ತು ಪ್ರಧಾನ ಮಂತ್ರಿ ಕ್ರಿಸ್ಟೋಫರ್ ಲುಕ್ಸನ್ ಅವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ, ಜೊತೆಗೆ ಶಿಕ್ಷಣ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಹಾಗೂ ಭಾರತೀಯ ಸಮುದಾಯದೊಂದಿಗೆ ಸಂವಹನ ನಡೆಸಲಿದ್ದಾರೆ.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್‌ನ ಪ್ರೀ ಕ್ವಾರ್ಟರ್‌ಫೈನಲ್‌ನಲ್ಲಿಂದು ಭಾರತದ ಕುಸ್ತಿಪಟು ವಿನೇಶ್ ಫೋಗಟ್ ಮಹಿಳೆಯರ ೫೦ ಕೆ.ಜಿ ಫ್ರೀಸ್ಟೈಲ್‌ನಲ್ಲಿ ಗೆಲುವು ಸಾಧಿಸಿದ್ದಾರೆ. ನಾಲ್ಕು ಬಾರಿಯ ವಿಶ್ವ ಚಾಂಪಿಯನ್ ಜಪಾನ್‌ನ ಯುಯಿ ಸುಸಾಕಿ ವಿರುದ್ಧ ೩-೨ ಅಂತರದಿಂದ ಗೆಲುವು ಸಾಧಿಸಿ ಸೆಮಿಫೈನಲ್ ತಲುಪಿದ್ದಾರೆ. ಜಾವಲಿನ್ ಥ್ರೊ ಅರ್ಹತಾ ಪಂದ್ಯದಲ್ಲಿ ಭಾರತದ ನೀರಜ್ ಚೋಪ್ರಾ ೮೯.೩೪ ಮೀಟರ್ ಎಸೆತದೊಂದಿಗೆ ಫೈನಲ್ ತಲುಪಿದ್ದು, ಚಿನ್ನದ ಪದಕದ ಮೇಲೆ ಕಣ್ಣಿಟ್ಟಿದ್ದಾರೆ. ಭಾರತದ ಇನ್ನೊಬ್ಬ ಜಾವಲಿನ್ ಎಸೆತಗಾರ ಕಿಶೋರ್ ಕುಮಾರ್ ಜೆನ ಫೈನಲ್ ತಲುಪುವಲ್ಲಿ ವಿಫಲರಾಗಿದ್ದಾರೆ. ಹಾಕಿ ಸೆಮಿಫೈನಲ್ ಪಂದ್ಯದಲ್ಲಿಂದು ಭಾರತ ಪುರುಷರ ತಂಡ ಜರ್ಮನಿಯನ್ನು ಎದುರಿಸಲಿದ್ದು, ಫೈನಲ್‌ನಲ್ಲಿ ಸ್ಥಾನ ಪಡೆಯಲು ಸೆಣಸಾಟ ನಡೆಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦:೩೦ ಕ್ಕೆ ಆರಂಭವಾಗಲಿದೆ. ಮಹಿಳೆಯರ ೪೦೦ ಮೀಟರ್ ಓಟದ ರಿಪಿಚೇಜ್ ಸುತ್ತಿನಲ್ಲಿ, ಭಾರತದ ಕಿರಣ್ ಪಹಲ್, ಸೆಮಿಫೈನಲ್ ಪ್ರವೇಶಿಸಲು ವಿಫಲರಾಗಿದ್ದಾರೆ. ರಿಪಿಚೇಜ್ ಹೀಟ್-೧ ರಲ್ಲಿ ೬ನೇ ಸ್ಥಾನ ಗಳಿಸಿದ್ದಾರೆ. ಟೇಬಲ್ ಟೆನಿಸ್‌ನಲ್ಲಿ ಹರ್ಮೀತ್ ದೇಸಾಯಿ, ಮಾನವ್ ಠಕ್ಕರ್ ಮತ್ತು ಅಚಂತಾ ಶರತ್ ಕಮಲ್ ಅವರನ್ನೊಳಗೊಂಡ ಭಾರತೀಯ ಪುರುಷರ ತಂಡ, ಚೀನಾ ವಿರುದ್ಧ ೧೬ನೇ ಸುತ್ತಿನಲ್ಲಿ ೦-೩ ಅಂತರದಿಂದ ಸೋಲು ಅನುಭವಿಸಿದ್ದಾರೆ.

<><*<><>*><>

ಕೇಳುಗರ ಗಮನಕ್ಕೆ...

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಒಲಿಂಪಿಕ್ಸ್ ಕ್ರೀಡಾಕೂಟದ ಪ್ರಸಾರದ ಹಿನ್ನೆಲೆಯಲ್ಲಿ ಬೆಳಗ್ಗೆ ೭-೩೫ಕ್ಕೆ ಪ್ರಸಾರವಾಗುತ್ತಿದ್ದ ರಾಷ್ಟ್ರೀಯ ವಾರ್ತೆಗಳು

ಇದೇ ತಿಂಗಳ ೧೧ರವರೆಗೆ ಬೆಳಗ್ಗೆ ೯ ಗಂಟೆ ೫ ನಿಮಿಷಕ್ಕೆ ಪ್ರಸಾರವಾಗಲಿದೆ.

**<><*<><>*><>**

ಭಾರೀ ಮಳೆಯಿಂದಾಗಿ ಉತ್ತರಪ್ರದೇಶದ ವಾರಾಣಸಿಯ ಕಾಶಿ ವಿಶ್ವಾನಾಥ ದೇಗುಲದ ಸಮೀಪ ಇಂದು ಬೆಳಗ್ಗೆ ಎರಡು ಕಟ್ಟಡಗಳು ಕುಸಿದು ಒಬ್ಬ ಮಹಿಳೆ ಮೃತಪಟ್ಟಿದ್ದು, ಇತರೆ ೯ ಮಂದಿ ಗಾಯಗೊಂಡಿದ್ದಾರೆ. ಸ್ಥಳಕ್ಕೆ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ-ಎನ್‌ಡಿಆರ್‌ಎಫ್, ಪೊಲೀಸ್, ವೈದ್ಯರು ಮತ್ತು ಶ್ವಾನದಳ ಧಾವಿಸಿದ್ದು, ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆ ಹಿನ್ನೆಲೆಯಲ್ಲಿ ವಾರಾಣಸಿ ಕ್ಷೇತ್ರದ ಸಂಸದರು ಕೂಡ ಆಗಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ವಾರಾಣಸಿ ಆಯುಕ್ತ ಕೌಶಲ್‌ರಾಜ್ ಅವರಿಗೆ ಕರೆ ಮಾಡಿ, ಘಟನೆ ಕುರಿತು ಮಾಹಿತಿ ಪಡೆದರು. ಅಲ್ಲದೆ, ಸಂತ್ರಸ್ತರ ಸಹಾಯಕ್ಕೆ ಧಾವಿಸುವಂತೆ ಸೂಚಿಸಿದರು. ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ವಾರಾಣಸಿ ಆಯುಕ್ತ ಕೌಶಲ್‌ರಾಜ್, ಕಾಶಿ ವಿಶ್ವನಾಥ್ ದೇಗುಲ ಸಮೀಪದ ಹಳೆಯ ಮನೆಗಳಲ್ಲಿ ವಾಸಿಸುತ್ತಿರುವ ನಾಗರಿಕರನ್ನು ಸುರಕ್ಷತೆಯ ದೃಷ್ಟಿಯಿಂದ ಮುಂದಿನ ಮೂರರಿಂದ ನಾಲ್ಕು ತಿಂಗಳ ಕಾಲ ಬೇರೆಡೆಗೆ ಸ್ಥಳಾಂತರವಾಗುವಂತೆ ಮನವಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ **<>*><>**